ಟೆಕ್ನಿಕಲ್ ಕಮಿಟಿಗೆ ರೆಫರ್ಸ್ ಮಾಡಿದ್ದೇವೆ, ಟೆಕ್ನಿಕಲ್ ಕಮಿಟಿಯ ವರದಿ ಬಂದ ನಂತರ ಆ ಕುರಿತು ನಿರ್ಧಾರ ಕೈಗೊಳ್ಳುತ್ತೇವೆ.

ಅಧ್ಯಕ್ಷರು: ಇಲ್ಲಿಗೆ ಪ್ರಶ್ನೋತ್ತರ ಮುಗಿಯಿತು.

(ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಪಿ.ಜಿ.ಆರ್.ಸಿಂಧ್ಯ(ಸಾರಿಗೆ ಸಚಿವರು): ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ದಿನಾಂಕ 18.2.97ರಂದು ಸದನದಲ್ಲಿ ಉತ್ತರಿಸಬೇಕಾದ ಐದನೇ ಪಟ್ಟಿಯಲ್ಲಿರುವ 123 ಪ್ರಶ್ನೆಗಳ ಪೈಕಿ 93 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದಿಡುತ್ತಿದ್ದೇನೆ.

ಹುಬ್ಬಳ್ಳಿಯಲ್ಲಿ ಪಡಿತರ ಚೀಟಿ ವಿತರಣೆ

176 (352) ಶ್ರೀ ಅಶೋಕ ಕಾಟವೆ (ಹುಬ್ಬಳ್ಳಿ):

ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು. ಈಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಹುಬ್ಬಳ್ಳಿಯಲ್ಲಿ ಕಳೆದ ಒಂದು ವರ್ಷದಿಂದ ಪಡಿತರ ಚೀಟಿ ವಿತರಣೆ ಸ್ಥಗಿತಗೊಂಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ತುರ್ತು ಕ್ರಮಗಳೇನು;

(ಇ) ಹಾಲಿ ಪಡಿತರ ಚೀಟಿ ಕೋರಿ ಬಂದ ಅರ್ಜಿಗಳೆಷ್ಟು; ಅವುಗಳನ್ನು ಎಷ್ಟು ಕಾಲಾವಧಿಯಲ್ಲಿ ವಿತರಿಸಲಾಗುವುದು?

ಶ್ರೀ ಜಿ. ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು.)

(ಅ) ಇಲ್ಲ. ಪಡಿತರ ಚೀಟಿಗಳನ್ನು ನೀಡುವುದನ್ನು ತಾತ್ಕಾಲಿಕವಾಗಿ ದಿನಾಂಕ 1-10-96 ರಿಂದ ತಡೆಹಿಡಿಯಲಾಗಿದೆ. ಏಕೆಂದರೆ, ಇಲಾಖೆಯು ನಕಲು ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ರದ್ದುಪಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು. ಈ ಕಾರ್ಯಕ್ರಮವು ಮಾರ್ಚ್ 1997ರ ವೇಳೆಗೆ ಮುಕ್ತಾಯವಾಗುವ ನಿರೀಕ್ಷೆ ಇದೆ. ಇದಾದನಂತರ ಪಡಿತರ ಚೀಟಿಗಳನ್ನು ಮಾರ್ಚ್ 1997 ರಿಂದ ನೀಡಲಾಗುವುದು.

(ಆ) ಉದ್ಭವಿಸುವುದಿಲ್ಲ.

(ಇ) ದಿನಾಂಕ 20-9-96ರ ವರೆಗೆ 5404 ಪಡಿತರ ಚೀಟಿಗಳಿಗಾಗಿ ಸಲ್ಲಿಸಲಾದ ಅರ್ಜಿಗಳ ಬಾಕಿ ಇದೆ. ಈ ಅರ್ಜಿಗಳನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: ಎಫ್ಪಿಎನ್ 20 ಡಿಆರ್ಎ 97, ದಿನಾಂಕ 5-2-97 ರಲ್ಲಿ ನೀಡಲಾಗಿರುವ ಮಾರ್ಗದರ್ಶಿಗಳಂತೆ ಪರಿಶೀಲಿಸಿ ಚೀಟಿಗಳನ್ನು ವಿತರಿಸಲಾಗುವುದು.

ಬಳ್ಳಾರಿ ಜಿಲ್ಲೆಯಲ್ಲಿ ಸಾರ್ವಜನಿಕ ವಿತರಣೆ ಪದ್ಧತಿ.

179(440) ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು):

ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) 26-1-97 ರಿಂದ ಸರ್ಕಾರ ಹೊಸ ಸಾರ್ವಜನಿಕ ವಿತರಣೆ ಪರಿಪಾಠಿಯನ್ನು ರಾಜ್ಯದಲ್ಲಿ ಜಾರಿಗೊಳಿಸಿದೆಯೇ;